Received on 31/8/2020
Wup

ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಆಯುಕ್ತರ ಕಛೇರಿಯ ನಡವಳಿಗಳು**

ವಿಷಯ: ಕಾಲೇಜು ಶಿಕ್ಷಣ ಇಲಾಖೆಯ **ದ್ವಿತೀಯ ದರ್ಜೆ ಸಹಾಯಕರುಗಳಿಗೆ ಪ್ರಥಮ ದರ್ಜೆ ಸಹಾಯಕರ** ಹುದ್ದೆಗೆ ಮುಂಬಡ್ತಿ ನೀಡುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ದಿನಾಂಕ : 27.02.2019 ಹಾಗೂ ದಿನಾಂಕ : 15.05.2019ರ ಸಂಖ್ಯೆ : ಸಿಆಸುಇ/186/ಎಸ್‌ಆರ್‌ಎಸ್/2018ರ ಆದೇಶಗಳು.
2. ಈ ಕಛೇರಿ ದಿನಾಂಕ : 05.08.2019 ರ ಸಂಖ್ಯೆ : ಕಾಶಿಇ/29/ದ್ವಿ.ದ.ಸ./ಜೇಪ/ಬಸ್ಥಾವಿ/2019-20ರ ಅಧಿಕೃತ ಜ್ಞಾಪನದೊಂದಿಗೆ ಪ್ರಕಟಿಸಿರುವ ರಾಜ್ಯವ್ಯಾಪಿ ಉಳಿಕೆ ಮೂಲವೃಂದದ **ದ್ವಿತೀಯ ದರ್ಜೆ ಸಹಾಯಕರುಗಳ** ಅಂತಿಮ ಜ್ಯೇಷ್ಠತಾ ಪಟ್ಟಿ.
3. ದಿನಾಂಕ: 26.02.2020 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯ ನಡವಳಿಗಳು.
4. ದಿನಾಂಕ : 20.08.2020 ರ ಸಂಖ್ಯೆ : ಕಾಶಿಇ/34/ ಬಡ್ತಿ/ಬಸ್ಥಾವಿ/2018-19ರ ಜ್ಞಾಪನ.

*****

ಪ್ರಸ್ತಾವನೆ:

ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ **ಪ್ರಥಮ ದರ್ಜೆ ಸಹಾಯಕರ** ಹುದ್ದೆಗಳಿಗೆ **ದ್ವಿತೀಯ ದರ್ಜೆ ಸಹಾಯಕರ** ಹುದ್ದೆಯಿಂದ ಶೇಕಡ 50ರಷ್ಟು ಹುದ್ದೆಗಳನ್ನು ಬಡ್ತಿ ಮೂಲಕ ತುಂಬಲು ಅವಕಾಶ ಕಲ್ಪಿಸಲಾಗಿರುತ್ತದೆ. ಉಲ್ಲೇಖ (2) ರ ಪತ್ರದೊಂದಿಗೆ ಪ್ರಕಟಿಸಿರುವ ಈ ಇಲಾಖೆಯ ರಾಜ್ಯವ್ಯಾಪಿ ಉಳಿಕೆ ಮೂಲವೃಂದದ **ದ್ವಿತೀಯ ದರ್ಜೆ ಸಹಾಯಕರುಗಳ** ಅಂತಿಮ ಜ್ಯೇಷ್ಠತಾ ಪಟ್ಟಿಯ ಆಧಾರದ ಮೇಲೆ **ಪ್ರಥಮ ದರ್ಜೆ ಸಹಾಯಕ** ವೃಂದದ ಖಾಲಿ ಹುದ್ದೆಗಳನ್ನು ಮುಂಬಡ್ತಿ ಮೂಲಕ ತುಂಬಬೇಕಾಗಿರುತ್ತದೆ. ದಿನಾಂಕ:26.02.2020 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ಖಾಲಿ ಇರುವ **ಪ್ರಥಮ ದರ್ಜೆ ಸಹಾಯಕರ** ಹುದ್ದೆಗಳನ್ನು ಜ್ಯೇಷ್ಠತೆ ಹಾಗೂ ಅರ್ಹತೆ ಆಧಾರದ ಮೇಲೆ ಅರ್ಹ **ದ್ವಿತೀಯ ದರ್ಜೆ ಸಹಾಯಕರುಗಳಿಗೆ** ಮುಂಬಡ್ತಿ ಮೂಲಕ ಭರ್ತಿ ಮಾಡಲು ತೀರ್ಮಾನಿಸಲಾಯಿತು.

ಮುಂದುವರೆಯುತ್ತಾ, ದಿನಾಂಕ : 24.07.2020, ಪತ್ರ ಸಂಖ್ಯೆ : ಇಡಿ/76/ಯುಇಸಿ/2020ರಲ್ಲಿ ಸರ್ಕಾರವು ನೀಡಿರುವ ಸೂಚನೆಯಂತೆ , ಕಾಲೇಜು ಶಿಕ್ಷಣ ಇಲಾಖೆಯ ವರ್ಗಾವಣೆ ಕಾಯಿದೆ-2012ರ ಕಲಂ (3)ರ ಉಪಬಂಧ (2)ರನ್ವಯ ವಲಯ-ಸಿ ಯಲ್ಲಿ ಖಾಲಿಯಿರುವ ಪ್ರಥಮ ದರ್ಜೆ ಸಹಾಯಕರ ಹುದ್ದೆಗಳಿಗೆ ಬಡ್ತಿ ನೀಡಲು ತೀರ್ಮಾನಿಸಲಾಗಿದೆ.

ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ **ದ್ವಿತೀಯ ದರ್ಜೆ ಸಹಾಯಕರ** ವೃಂದದಿಂದ **ಪ್ರಥಮ ದರ್ಜೆ ಸಹಾಯಕರ** ವೃಂದಕ್ಕೆ ಬಡ್ತಿ ಹೊಂದಲು ಅರ್ಹರಿರುವ **ದ್ವಿತೀಯ ದರ್ಜೆ ಸಹಾಯಕರುಗಳಿಗೆ** ಸ್ಥಳ ಆಯ್ಕೆ ಮಾಡಿಕೊಳ್ಳಲು ಉಲ್ಲೇಖ (4)ರ ಜ್ಞಾಪನದಲ್ಲಿ

ದಿನಾಂಕ:20.08.2020 ರಂದು ಕೌನ್ಸಿಲಿಂಗ್‌ಗೆ ಹಾಜರಾಗಲು ಸೂಚಿಸಲಾಗಿತ್ತು. ಅದರಂತೆ, ದಿನಾಂಕ:24.08.2020ರಂದು ಸ್ಥಳ ಆಯ್ಕೆಗಾಗಿ ನಡೆಸಿದ ಕೌನ್ಸಿಲಿಂಗ್‌ನಲ್ಲಿ ಸ್ಥಳ ಆಯ್ಕೆ ಮಾಡಿಕೊಂಡಿರುವ ದ್ವಿತೀಯ ದರ್ಜೆ ಸಹಾಯಕರುಗಳಿಗೆ ಪ್ರಥಮ ದರ್ಜೆ ಸಹಾಯಕರಾಗಿ ಸ್ಥಾನಪನ್ನ ಬಡ್ತಿ ನೀಡಿ ಸ್ಥಳನಿಯುಕ್ತಿ ಆದೇಶ ಹೊರಡಿಸಬೇಕಾಗಿರುವುದರಿಂದ, ಈ ಕೆಳಕಂಡ ಆದೇಶ.

<u>ಆದೇಶ ಸಂಖ್ಯೆ: ಕಾಶಿಇ/34/ಪ್ರದಸ/ಬಡ್ತಿ/ಬಸ್ಥಾವಿ/2018-19, ಬೆಂಗಳೂರು, ದಿನಾಂಕ:24.08.2020</u>

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಕೆಳಕಂಡ ದ್ವಿತೀಯ ದರ್ಜೆ ಸಹಾಯಕರುಗಳಿಗೆ ವೇತನ ಶ್ರೇಣಿ *ರೂ. 27650-650-29600-750-32600-850-36000-950-39800-1100-46400-1250-52650* ರಲ್ಲಿ ತಾತ್ಕಾಲಿಕವಾಗಿ ಹಾಗೂ ಮುಂದಿನ ಆದೇಶದವರೆಗೆ ಪ್ರಥಮ ದರ್ಜೆ ಸಹಾಯಕರ ಹುದ್ದೆಗೆ ಸ್ಥಾನಪನ್ನ ಬಡ್ತಿ ನೀಡಿ ಅವರುಗಳ ಹೆಸರಿನ ಮುಂದೆ ಕೌನ್ಸಿಲಿಂಗ್‌ನಲ್ಲಿ ಆಯ್ಕೆ ಮಾಡಿಕೊಂಡಿರುವ ಖಾಲಿ ಹುದ್ದೆಗೆ ಎದುರಾಗಿ ಈ ಕೂಡಲೇ ಜಾರಿಗೆ ಬರುವಂತೆ ಸ್ಥಳ ನಿಯುಕ್ತಿಗೊಳಿಸಲಾಗಿದೆ.

<u>ರಾಜ್ಯವ್ಯಾಪಿ ಉಳಿಕೆ ಮೂಲ ವೃಂದ (ಆರ್.ಕೆ.)</u>

| ಕ್ರ. ಸಂ | ಹೆಸರು ಶ್ರೀ/ಶ್ರೀಮತಿ | ಕಾರ್ಯ ನಿರ್ವಹಿಸುತ್ತಿರುವ ಕಛೇರಿ/ಕಾಲೇಜು | ಬಡ್ತಿ ನೀಡಿ ಸ್ಥಳ ನಿಯುಕ್ತಿಗೊಳಿಸಿದ ಕಛೇರಿ/ಕಾಲೇಜು | ಷರಾ |
|---|---|---|---|---|
| 1 | ಶರಜಬಾನು | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ತುರುವನೂರು | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಪರಶುರಾಮಪುರ | ಖಾಲಿ ಹುದ್ದೆಗೆ ಎದುರಾಗಿ |
| 2 | ದುರ್ಗಪ್ಪ ಚೌಡಪ್ಪ ತೊಗಟಿಗಾರ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಅಜ್ಜಂಪುರ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಚಿತ್ರಹಳ್ಳಿ, ಹೊಳಲ್ಕೆರೆ ತಾಲ್ಲೂಕು | ಖಾಲಿ ಹುದ್ದೆಗೆ ಎದುರಾಗಿ |
| 3 | ರೊನಾಲ್ಡ್ ಫ್ರಾನ್ಸಿಸ್ ಲೋಬೊ | ಸರ್.ಎಂ.ವಿ. ಕಲಾ ಮತ್ತು ವಾಣಿಜ್ಯ ಕಾಲೇಜು, ಭದ್ರಾವತಿ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಬಾಣಾವರ, ಅರಸಿಕೆರೆ (ತಾಲ್ಲೂಕು) | ಖಾಲಿ ಹುದ್ದೆಗೆ ಎದುರಾಗಿ |
| 4 | ನಂದಕುಮಾರ್.ಆರ್ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಬೇಲೂರು | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹಳೇಬೀಡು. | ಖಾಲಿ ಹುದ್ದೆಗೆ ಎದುರಾಗಿ |
| 5 | ಜಯಲಕ್ಷ್ಮಮ್ಮ.ವಿ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ವಿಜಯನಗರ, ಬೆಂಗಳೂರು | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಕ್ಯಾತನಹಳ್ಳಿ. | ಖಾಲಿ ಹುದ್ದೆಗೆ ಎದುರಾಗಿ |
| 6 | ಸ್ವರೂಪ್‌ಕಿಶನ್.ವಿ | ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜು, ಬೆಂಗಳೂರು | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಕೆ.ಆರ್.ಸಾಗರ | ಖಾಲಿ ಹುದ್ದೆಗೆ ಎದುರಾಗಿ |
| 7 | ನಂದೀಶ್ ಬಾಬು.ಎಲ್ | ಕೇಂದ್ರ ಕಛೇರಿ, ಬೆಂಗಳೂರು | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಸಿ.ಎಸ್.ಪುರ, ಗುಬ್ಬಿ (ತಾಲ್ಲೂಕು) | ಖಾಲಿ ಹುದ್ದೆಗೆ ಎದುರಾಗಿ |
| 8 | ಶಿಲ್ಪ ಹಣಮಂತ್ ಸಮಗಾರ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಕಡೂರು | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಯಗಟಿ | ಖಾಲಿ ಹುದ್ದೆಗೆ ಎದುರಾಗಿ |
| 9 | ಚೆಲುವರಾಜ್.ಎಸ್. ಆರ್ | ಮಹಾರಾಣಿ ಮಹಿಳಾ ಕಲಾ ಮತ್ತು ವಾಣಿಜ್ಯ ಕಾಲೇಜು, ಬೆಂಗಳೂರು | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹಿರಿಸಾವೆ, ಚನ್ನರಾಯಪಟ್ಟಣ (ತಾ) | ಖಾಲಿ ಹುದ್ದೆಗೆ ಎದುರಾಗಿ |

ಬಡ್ತಿ ಹೊಂದಿರುವ ದ್ವಿತೀಯ ದರ್ಜೆ ಸಹಾಯಕರುಗಳು ಆದೇಶದ ಪ್ರತಿಯನ್ನು ಇಲಾಖಾ ವೆಬ್‌ಸೈಟ್‌ನಿಂದ ಪಡೆದು ಸ್ಥಳನಿಯುಕ್ತಿಗೊಳಸಲಾದ ಕಾಲೇಜಿನಲ್ಲಿ ಈ ಆದೇಶ ತಲುಪಿದ 15 ದಿನಗಳೊಳಗಾಗಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳತಕ್ಕದ್ದು, ತಪ್ಪಿದಲ್ಲಿ ಬಡ್ತಿಯನ್ನು ರದ್ದುಪಡಿಸಲಾಗುವುದು. ಬಡ್ತಿಗೊಂಡ ನೌಕರರು ನಿಯಮಾನುಸಾರ ಸೇರುವಿಕೆ ಕಾಲ ಪಡೆಯಲು ಅರ್ಹರಿರುತ್ತಾರೆ.

ಪ್ರಸ್ತುತ ನಿಯೋಜನೆ ಮೇರೆ ಕರ್ತವ್ಯ ನಿರ್ವಹಿಸುತ್ತಿರುವ ದ್ವಿತೀಯ ದರ್ಜೆ ಸಹಾಯಕರ ನಿಯೋಜನೆಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಲಾಗಿದೆ.

ಆಯುಕ್ತರು
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಇವರಿಗೆ:

1) ಎಲ್ಲಾ ಪ್ರಾದೇಶಿಕ ಕಛೇರಿಯ ಜಂಟಿ ನಿರ್ದೇಶಕರುಗಳಗೆ-ಮಾಹಿತಿ ಹಾಗೂ ಮುಂದಿನ ಅಗತ್ಯಕ್ರಮಕ್ಕಾಗಿ.
2) ಮೇಲ್ಕಂಡ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಗೆ-ಮಾಹಿತಿ ಹಾಗೂ ಮುಂದಿನ ಅಗತ್ಯ ಕ್ರಮಕ್ಕಾಗಿ.
3) ಮೇಲ್ಕಂಡ ಎಲ್ಲಾ ದ್ವಿತೀಯ ದರ್ಜೆ ಸಹಾಯಕರುಗಳಗೆ (ಸಂಬಂಧಪಟ್ಟ ಮೇಲಾಧಿಕಾರಿ/ಪ್ರಾಂಶುಪಾಲರ ಮೂಲಕ)
4) ಮಾಹಿತಿ ಅಧಿಕಾರಿಗಳು, ಮಾಹಿತಿ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು - ಸದರಿ ಆದೇಶವನ್ನು ಇಲಾಖಾ ವೆಬ್-ಸೈಟ್‌ನಲ್ಲಿ ಪ್ರಕಟಿಸುವ ಸಂಬಂಧ ಅಗತ್ಯ ಕ್ರಮಕ್ಕಾಗಿ.

ಪ್ರತಿಗಳು:

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2) ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
3) ಕೇಂದ್ರ ಕಛೇರಿಯ ಎಲ್ಲಾ ಅಧಿಕಾರಿಗಳು/ಎಲ್ಲಾ ವಿಭಾಗಗಳ ಅಧೀಕ್ಷಕರುಗಳು – ಮಾಹಿತಿಗಾಗಿ.

Received on 31/8/2020
WVP

ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಆಯುಕ್ತರ ಕಛೇರಿಯ ನಡವಳಿಗಳು**

ವಿಷಯ: ಕಾಲೇಜು ಶಿಕ್ಷಣ ಇಲಾಖೆಯ **ಅಟೆಂಡರ್**‌ಗಳಿಗೆ **ದ್ವಿತೀಯ ದರ್ಜೆ ಸಹಾಯಕರ** ಹುದ್ದೆಗೆ ಮುಂಬಡ್ತಿ ನೀಡುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ದಿನಾಂಕ : 27.02.2019 ಹಾಗೂ ದಿನಾಂಕ : 15.05.2019ರ ಸಂಖ್ಯೆ : ಸಿಆಸುಇ/186/ಎಸ್‌ಆರ್‌ಎಸ್/2018ರ ಆದೇಶಗಳು.
2. ಈ ಕಛೇರಿ ದಿನಾಂಕ : 05.03.2020ರ ಸಂಖ್ಯೆ : ಕಾಶಿಇ/30/ಅಟೆಂಡರ್/ಜೇಪ/ಬಸ್ಥಾವಿ/2019-20ರ ಅಧಿಕೃತ ಜ್ಞಾಪನದೊಂದಿಗೆ ಪ್ರಕಟಿಸಿರುವ ರಾಜ್ಯವ್ಯಾಪಿ ಉಳಿಕೆ ಮೂಲ ವೃಂದ ಹಾಗೂ ಕಲ್ಯಾಣ-ಕರ್ನಾಟಕ ಸ್ಥಳೀಯ ವೃಂದದ **ಅಟೆಂಡರ್**‌ಗಳ ಅಂತಿಮ ಜ್ಯೇಷ್ಠತಾ ಪಟ್ಟಿ.
3. ದಿನಾಂಕ: 14.07.2020 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯ ನಡವಳಿಗಳು.
4. ದಿನಾಂಕ : 20.08.2020 ರ ಸಂಖ್ಯೆ : ಕಾಶಿಇ/57/ದ್ವಿದಸ/ಬಡ್ತಿ/ಬಸ್ಥಾವಿ/2018-19ರ ಜ್ಞಾಪನ.

*****

ಪ್ರಸ್ತಾವನೆ:

ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ **ದ್ವಿತೀಯ ದರ್ಜೆ ಸಹಾಯಕರ** ಹುದ್ದೆಗಳಿಗೆ **ಅಟೆಂಡರ್** ಹುದ್ದೆಯಿಂದ ಶೇಕಡ 33ರಷ್ಟು ಹುದ್ದೆಗಳನ್ನು ಬಡ್ತಿ ಮೂಲಕ ತುಂಬಲು ಅವಕಾಶ ಕಲ್ಪಿಸಲಾಗಿರುತ್ತದೆ. ಉಲ್ಲೇಖ (2) ರ ಪತ್ರದೊಂದಿಗೆ ಪ್ರಕಟಿಸಿರುವ ಈ ಇಲಾಖೆಯ ರಾಜ್ಯವ್ಯಾಪಿ ಉಳಿಕೆ ಮೂಲವೃಂದ ಹಾಗೂ ಕಲ್ಯಾಣ- ಕರ್ನಾಟಕ ಸ್ಥಳೀಯ ವೃಂದದ **ಅಟೆಂಡರ್**‌ಗಳ ಅಂತಿಮ ಜ್ಯೇಷ್ಠತಾ ಪಟ್ಟಿಯ ಆಧಾರದ ಮೇಲೆ **ದ್ವಿತೀಯ ದರ್ಜೆ ಸಹಾಯಕರ** ವೃಂದದ ಖಾಲಿ ಹುದ್ದೆಗಳನ್ನು ಮುಂಬಡ್ತಿ ಮೂಲಕ ತುಂಬಬೇಕಾಗಿರುತ್ತದೆ. ದಿನಾಂಕ:14.07.2020ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ಖಾಲಿ ಇರುವ **ದ್ವಿತೀಯ ದರ್ಜೆ ಸಹಾಯಕರ** ಹುದ್ದೆಗಳನ್ನು ಜ್ಯೇಷ್ಠತೆ ಹಾಗೂ ಅರ್ಹತೆ ಆಧಾರದ ಮೇಲೆ ಅರ್ಹ **ಅಟೆಂಡರ್**‌ಗಳಿಂದ ಮುಂಬಡ್ತಿ ಮೂಲಕ ಭರ್ತಿ ಮಾಡಲು ತೀರ್ಮಾನಿಸಲಾಯಿತು.

ಮುಂದುವರೆಯುತ್ತಾ, ದಿನಾಂಕ : 24.07.2020 ರ ಪತ್ರ ಸಂಖ್ಯೆ : ಇಡಿ/76/ಯುಇಸಿ/2020ರಲ್ಲಿ ಸರ್ಕಾರವು ಮ್ಯಾನೇಜರ್ ಹುದ್ದೆಯ ಬಡ್ತಿಗೆ ಸಂಬಂಧಿಸಿದಂತೆ, ನೀಡಿರುವ ಸೂಚನೆಯನ್ನೇ **ದ್ವಿತೀಯ ದರ್ಜೆ ಸಹಾಯಕರ** ಹುದ್ದೆಯ ಬಡ್ತಿಗೂ ಅನ್ವಯಿಸಲು ಹಾಗೂ ಕಾಲೇಜು ಶಿಕ್ಷಣ ಇಲಾಖೆಯ ವರ್ಗಾವಣೆ ಕಾಯಿದೆ-2012ರ ಕಲಂ (3)ರ ಉಪಬಂಧ (2)ರನ್ವಯ, ವಲಯ-ಸಿ ಯಲ್ಲಿ ಖಾಲಿಯಿರುವ **ದ್ವಿತೀಯ ದರ್ಜೆ ಸಹಾಯಕರ** ಹುದ್ದೆಗಳಿಗೆ ಬಡ್ತಿ ನೀಡಲು ತೀರ್ಮಾನಿಸಲಾಗಿದೆ.

ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ **ಅಟೆಂಡರ್** ವೃಂದದಿಂದ **ದ್ವಿತೀಯ ದರ್ಜೆ ಸಹಾಯಕರ** ವೃಂದಕ್ಕೆ ಬಡ್ತಿ ಹೊಂದಲು ಅರ್ಹರಿರುವ **ಅಟೆಂಡರ್**‌ಗಳಿಗೆ ಸ್ಥಳ ಆಯ್ಕೆ ಮಾಡಿಕೊಳ್ಳಲು ಉಲ್ಲೇಖ (4)ರ ಜ್ಞಾಪನದಲ್ಲಿ ದಿನಾಂಕ:20.08.2020ರಂದು ಕೌನ್ಸಿಲಿಂಗ್‌ಗೆ

ಹಾಜರಾಗಲು ಸೂಚಿಸಲಾಗಿತ್ತು. ಅದರಂತೆ, ದಿನಾಂಕ:26.08.2020ರಂದು ಸ್ಥಳ ಆಯ್ಕೆಗಾಗಿ ನಡೆಸಿದ ಕೌನ್ಸಿಲಿಂಗ್‌ನಲ್ಲಿ ಸ್ಥಳ ಆಯ್ಕೆ ಮಾಡಿಕೊಂಡಿರುವ **ಅಟೆಂಡರ್**ಗಳಿಗೆ **ದ್ವಿತೀಯ ದರ್ಜೆ ಸಹಾಯಕರಾಗಿ** ಸ್ಥಾನಪನ್ನ ಬಡ್ತಿ ನೀಡಿ ಸ್ಥಳನಿಯುಕ್ತಿ ಆದೇಶ ಹೊರಡಿಸಬೇಕಾಗಿರುವುದರಿಂದ, ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ: ಕಾಶಿಇ/57/ದ್ವಿದಸ/ಬಡ್ತಿ/ಬಸ್ಥಾವಿ/2018-19 ಬೆಂಗಳೂರು, ದಿನಾಂಕ:29.08.2020**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಕೆಳಕಂಡ **ಅಟೆಂಡರ್**ಗಳಿಗೆ ವೇತನ ಶ್ರೇಣಿ *ರೂ. ರೂ. 21400-500-22400-550-24600-600-27000-650-29600-750-32600-850-36000-950-39800-1100-42000* ರಲ್ಲಿ ತಾತ್ಕಾಲಿಕವಾಗಿ ಹಾಗೂ ಮುಂದಿನ ಆದೇಶದವರೆಗೆ **ದ್ವಿತೀಯ ದರ್ಜೆ ಸಹಾಯಕರ** ವೃಂದಕ್ಕೆ ಸ್ಥಾನಪನ್ನ ಬಡ್ತಿ ನೀಡಿ ಅವರುಗಳ ಹೆಸರಿನ ಮುಂದೆ ಕೌನ್ಸಿಲಿಂಗ್‌ನಲ್ಲಿ ಆಯ್ಕೆ ಮಾಡಿಕೊಂಡಿರುವ ಖಾಲಿ ಹುದ್ದೆಗೆ ಎದುರಾಗಿ ಈ ಕೂಡಲೇ ಜಾರಿಗೆ ಬರುವಂತೆ ಸ್ಥಳ ನಿಯುಕ್ತಿಗೊಳಿಸಲಾಗಿದೆ.

ರಾಜ್ಯವ್ಯಾಪಿ ಉಳಿಕೆ ಮೂಲ ವೃಂದ (ಆರ್.ಕೆ.)

| ಕ್ರ. ಸಂ | ಹೆಸರು ಶ್ರೀ/ಶ್ರೀಮತಿ | ಕಾರ್ಯ ನಿರ್ವಹಿಸುತ್ತಿರುವ ಕಛೇರಿ/ಕಾಲೇಜು | ಬಡ್ತಿ ನೀಡಿ ಸ್ಥಳ ನಿಯುಕ್ತಿಗೊಳಿಸಿದ ಕಛೇರಿ/ಕಾಲೇಜು | ಷರಾ |
|---|---|---|---|---|
| 1 | ಕಲಾವತಿ ಹೆಚ್ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹೊನ್ನಾಳಿ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ನ್ಯಾಮತಿ. | ಖಾಲಿ ಹುದ್ದೆಗೆ ಎದುರಾಗಿ |
| 2 | ರಘುಶಿವನಾಯಕ್ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಬಾಡ, ಕುಮಟ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಬೈಂದೂರು. | ಖಾಲಿ ಹುದ್ದೆಗೆ ಎದುರಾಗಿ |
| 3 | ಚನ್ನಪ್ಪನವರ್ ಎಸ್.ಜಿ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ನರೇಗಲ್ಲ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಗುಡಿಗೇರಿ. | ಖಾಲಿ ಹುದ್ದೆಗೆ ಎದುರಾಗಿ |
| 4 | ಮಠಪತಿ ಐ ಬಿ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ನವಲಗುಂದ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಅಕ್ಕಿ ಆಲೂರು | ಖಾಲಿ ಹುದ್ದೆಗೆ ಎದುರಾಗಿ |
| 5 | ನಾಗರಾಜ್ ಆರ್ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ದಾವಣಗೆರೆ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ವಾಮನಪದವು. | ಖಾಲಿ ಹುದ್ದೆಗೆ ಎದುರಾಗಿ |
| 6 | ಕಮ್ಮಾರ ಪಿ ವೈ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಅಳ್ನಾವರ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ನೇಸರ್ಗಿ. | ಖಾಲಿ ಹುದ್ದೆಗೆ ಎದುರಾಗಿ |
| 7 | ರಾಮಕೃಷ್ಣಾಚಾರಿ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಫ್ರೇಜರ್ ಟೌನ್, ಬೆಂಗಳೂರು | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹೆಸರಘಟ್ಟ. | ಖಾಲಿ ಹುದ್ದೆಗೆ ಎದುರಾಗಿ |
| 8 | ಶ್ರೀನಿವಾಸ ಸರವೇಗಾರ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಬಾರ್ಕೂರು | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಬಾರ್ಕೂರು | ಖಾಲಿ ಹುದ್ದೆಗೆ ಎದುರಾಗಿ |
| 9 | ಲಕ್ಷ್ಮಣ ಹೆಚ್ ಆರ್ | ಸರ್ಕಾರಿ ಕಲಾ ಮತ್ತು ವಾಣಿಜ್ಯ ಕಾಲೇಜು, ಹಾಸನ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ನಾಪೋಕ್ಲು | ಖಾಲಿ ಹುದ್ದೆಗೆ ಎದುರಾಗಿ |

## ಕಲ್ಯಾಣ-ಕರ್ನಾಟಕ ಸ್ಥಳೀಯ ವೃಂದ (ಕೆ.ಕೆ.)

| ಕ್ರ.ಸಂ | ಹೆಸರು ಶ್ರೀ/ಶ್ರೀಮತಿ | ಕಛೇರಿ/ಕಾಲೇಜಿನ ಹೆಸರು | ಬಡ್ತಿ ನೀಡಿ ಸ್ಥಳ ನಿಯುಕ್ತಿಗೊಳಿಸಿದ ಕಛೇರಿ/ಕಾಲೇಜು | ಷರಾ |
|---|---|---|---|---|
| 1 | ಮಹಮ್ಮದ್ ಜಾಫರ್ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಬೀದರ್ | ಸರ್ಕಾರಿ ಕಾನೂನು ಕಾಲೇಜು, ಮರ್ತೂರು, ಕಲಬುರಗಿ. | ಖಾಲಿ ಹುದ್ದೆಗೆ ಎದುರಾಗಿ |
| 2 | ಎರ್ರಿಸ್ವಾಮಿ ಕೆ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಬಳ್ಳಾರಿ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಮಂಗಳೂರು, ಯಲಬುರ್ಗಾ (ತಾ) | ಖಾಲಿ ಹುದ್ದೆಗೆ ಎದುರಾಗಿ |

ಬಡ್ತಿ ಹೊಂದಿರುವ ಅಟೆಂಡರ್‌ಗಳು ಆದೇಶದ ಪ್ರತಿಯನ್ನು ಇಲಾಖಾ ವೆಬ್‌ಸೈಟ್‌ನಿಂದ ಪಡೆದು ಸ್ಥಳನಿಯುಕ್ತಿಗೊಳಿಸಲಾದ ಕಾಲೇಜಿನಲ್ಲಿ, ಈ ಆದೇಶ ತಲುಪಿದ 15 ದಿನಗಳೊಳಗಾಗಿ ಕರ್ತವ್ಯಕ್ಕೆ ಹಾಜರಾಗಿ ವರದಿ ಮಾಡಿಕೊಳ್ಳತಕ್ಕದ್ದು, ತಪ್ಪಿದಲ್ಲಿ ಬಡ್ತಿಯನ್ನು ರದ್ದುಪಡಿಸಲಾಗುವುದು. ಬಡ್ತಿಗೊಂಡ ನೌಕರರು ನಿಯಮಾನುಸಾರ ಸೇರುವಿಕೆ ಕಾಲ ಪಡೆಯಲು ಅರ್ಹರಿರುತ್ತಾರೆ.

ಪ್ರಸ್ತುತ ನಿಯೋಜನೆ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಅಟೆಂಡರ್‌ಗಳ ನಿಯೋಜನೆಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಲಾಗಿದೆ.

ಆಯುಕ್ತರು
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಇವರಿಗೆ:

1) ಮಹಾಲೇಖಪಾಲರು, (ಎ&ಇ) ಕರ್ನಾಟಕ, ಬೆಂಗಳೂರು – ಮಾಹಿತಿಗಾಗಿ.
2) ಎಲ್ಲಾ ಪ್ರಾದೇಶಿಕ ಕಛೇರಿಯ ಜಂಟಿ ನಿರ್ದೇಶಕರುಗಳಿಗೆ–ಮಾಹಿತಿ ಹಾಗೂ ಮುಂದಿನ ಅಗತ್ಯಕ್ರಮಕ್ಕಾಗಿ.
3) ಮೇಲ್ಕಂಡ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ–ಮಾಹಿತಿ ಹಾಗೂ ಮುಂದಿನ ಅಗತ್ಯ ಕ್ರಮಕ್ಕಾಗಿ.
4) ಮೇಲ್ಕಂಡ ಅಟೆಂಡರ್‌ಗಳಿಗೆ (ಸಂಬಂಧಪಟ್ಟ ಮೇಲಾಧಿಕಾರಿ/ಪ್ರಾಂಶುಪಾಲರು ಮೂಲಕ)
5) ಮಾಹಿತಿ ಅಧಿಕಾರಿಗಳು, ಮಾಹಿತಿ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ಸದರಿ ಆದೇಶವನ್ನು ಇಲಾಖಾ ವೆಬ್-ಸೈಟ್‌ನಲ್ಲಿ ಪ್ರಕಟಿಸುವ ಸಂಬಂಧ ಅಗತ್ಯ ಕ್ರಮಕ್ಕಾಗಿ.

ಪ್ರತಿಗಳು:

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2) ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
3) ಕೇಂದ್ರ ಕಛೇರಿಯ ಎಲ್ಲಾ ಅಧಿಕಾರಿಗಳು/ಎಲ್ಲಾ ವಿಭಾಗಗಳ ಅಧೀಕ್ಷಕರುಗಳು – ಮಾಹಿತಿಗಾಗಿ.